ರಸಗೊಬ್ಬರ:

ರೈತರ ಆತಂಕವನ್ನು ನಿವಾರಿಸುವುದಕ್ಕಾಗಿ ಸರ್ಕಾರವು ರಸಗೊಬ್ಬರಗಳನ್ನು ತ್ವರಿತವಾಗಿ ಕಾಪು ದಾಸ್ತಾನು ಯೋಜನೆ ತಯಾರಿಸಿ ರಸಗೊಬ್ಬರಗಳನ್ನು ದಾಸ್ತಾನು ಮಾಡಿರುವುದಲ್ಲದೆ, ರಾಜ್ಯದಲ್ಲಿ ರಸಗೊಬ್ಬರದ ಅಭಾವ ಕಂಡು ಬಂದಲ್ಲಿ ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದೊಂದಿಗೆ ಸಂಪರ್ಕ ಹೊಂದಿದ್ದು ಹೆಚ್ಚಿನ ರಸಗೊಬ್ಬರ ಸರಬರಾಜಿಗೆ ಕ್ರಮ ಕೈಗೊಳ್ಳುತ್ತದೆ. ಅಲ್ಲದೇ ರೈತರಿಗೆ ಬೇಕಾದ ಬಿತ್ತನೆ ಬೀಜಗಳನ್ನು ವಿವಿಧ ಯೋಜನೆಗಳಡಿ ರಿಯಾಯಿತಿ ದರದಲ್ಲಿ ಕೃಷಿ ಇಲಾಖೆಯ ರೈತ ಸಂಪರ್ಕ ಕೇಂದ್ರಗಳ ಮೂಲಕ ವಿತರಿಸಲಾಗುತ್ತಿದೆ.

ಸಹಕಾರಿ ವ್ಯಾಜ್ಯಗಳ ಇತ್ಯರ್ಥ

189(363) ಶ್ರೀ ಎನ್ ಎ ಹ್ಯಾರಿಸ್:(ಶಾಂತಿನಗರ) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಹಕಾರಿ ಸಂಸ್ಥೆಗಳಲ್ಲಿ ಇತ್ಯರ್ಥಕ್ಕಾಗಿ ಬಾಕಿ ಇರುವ ವ್ಯಾಜ್ಯಗಳ ಸಂಖ್ಯೆ ಎಷ್ಟು?

ಆ) ವ್ಯಾಜ್ಯಗಳ ಶೀಘ್ರ ಇತ್ಯರ್ಥಕ್ಕಾಗಿ ಸರ್ಕಾರ ಯೋಜನೆ ರೂಪಿಸಿದೆಯೇ? (ವಿವರ ನೀಡುವುದು)

ಇ). ಹಾಗಿದ್ದಲ್ಲಿ ವ್ಯಾಜ್ಯಗಳ ತ್ವರಿತ ಇತ್ಯರ್ಥಕ್ಕಾಗಿ ನೂತನ ನ್ಯಾಯಲಯಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? (ವಿವರ ನೀಡುವುದು)

ಶ್ರೀ ಲಕ್ಷ್ಮಣ ಸ ಸವದಿ(ಸಹಕಾರ ಸಚಿವರು):

ಅ) ಬಾಕಿ ಇರುವ ಪ್ರಕರಣಗಳ ಸಂಖ್ಯೆ 16720.

ಆ) ಹೌದು.

ವ್ಯಾಜ್ಯಗಳ ಶೀಘ್ರ ಇತ್ಯರ್ಥಕ್ಕಾಗಿ ರಾಜ್ಯದಲ್ಲಿ 11 ಸಹಕಾರಿ ಹೊಸ ನ್ಯಾಯಾಲಯಗಳನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ.

ಕ್ರಮ ಸಂ	ಜಿಲ್ಲೆಗಳು	ಶಿಪಾರಸ್ಸು ಮಾಡಲಾದ ನ್ಯಾಯಾಲಯಗಳ ಸಂಖ್ಯೆ:

01	ಬೆಂಗಳೂರು ನಗರ ಜಿಲ್ಲೆ (ಸಹಕಾರ ಸಂಘಗಳ ನಿಬಂಧಕರ ಕಛೇರಿಯನ್ನು ಒಳಗೊಂಡಂತೆ)	02
02	ಬೆಂಗಳೂರು ಗ್ರಾಮಾಂತರ, ಕೋಲಾರ, ತುಮಕೂರು	01
03	ಚಿತ್ರದುರ್ಗ, ಶಿವಮೊಗ್ಗ, ದಾವಣಗೆರೆ	01
04	ಮೈಸೂರು, ಮಂಡ್ಯ ಹಾಗೂ ಚಾಮರಾಜನಗರ	01
05	ಹಾಸನ, ಚಿಕ್ಕಮಗಳೂರು ಹಾಗೂ ಕೊಡಗು ಹಾಗು ಉತ್ತರಕನ್ನಡ	01
06	ದಕ್ಷಿಣ ಕನ್ನಡ, ಕಾರವಾರ, ಉಡುಪಿ ಹಾಗೂ ಉತ್ತರ ಕನ್ನಡ	01
07	ಬೆಳಗಾವಿ	01
08	ಬಿಜಾಪುರ ಹಾಗೂ ಬಾಗಲಕೋಟೆ	01
09	ಧಾರವಾಡ, ಗದಗ ಹಾಗೂ ಹಾವೇರಿ	01
10	ಗುಲಬರ್ಗಾ, ಹಾವೇರಿ, ಬಳ್ಳಾರಿ, ರಾಯಚೂರು ಹಾಗೂ ಕೊಪ್ಪಳ	01
ಒಟ್ಟು	11 ನ್ಯಾಯಾಲಯಗಳು	

ಇ) ಹೌದು.

ಆರ್ಥಿಕ ಇಲಾಖೆಗೆ ಅನುಮೋದನೆ ಕೋರಿ ದಿನಾಂಕ11.06.2010ರಂದು ಕಡತವನ್ನು ಕಳುಹಿಸಲಾಗಿದೆ.

ತೋಟಗಾರಿಕಾ ವಿಶ್ವವಿದ್ಯಾನಿಲಯ ಮಂಜೂರಾತಿ

190(407) **ಶ್ರೀ ಕರಡಿ ಸಂಗಣ್ಣ ಅಮರಪ್ಪ:**(ಕೊಪ್ಪಳ) ಮಾನ್ಯ ತೋಟಗಾರಿಕೆ ಮತ್ತು ಬಂದೀಖಾನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಪ್ಪಳದಲ್ಲಿ ತೋಟಗಾರಿಕಾ ವಿಶ್ವವಿದ್ಯಾನಿಲಯವನ್ನು ಪ್ರಾರಂಭಿಸುವುದಾಗಿ ಅಯವ್ಯಯದ ಅಧಿವೇಶನದ ಸಮಯದಲ್ಲಿ ಘೋಷಣೆ ಮಾಡಿರುವುದು ನಿಜವೇ;